# Akashvani: Bangalore
# Regional Bulletin In Kannada
# 08.01.2026 : 14.30hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 08.01.2026 : 14.30hrs

*********

**ಮುಖ್ಯಾಂಶಗಳು :**

1. ಬಳ್ಳಾರಿ ಪ್ರಕರಣವನ್ನು ಸಿಬಿಐಗೆ ವಹಿಸುವುದಿಲ್ಲ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ
2. ಯೋಗದಿಂದ ಓಪಿಯಾಯ್ಡ್ ವಿಥ್‌ಡ್ರಾವಲ್ ಲಕ್ಷಣಗಳಲ್ಲಿ ಚೇತರಿಕೆ; ನಿಮ್ಹಾನ್ಸ್ ಸಂಶೋಧನೆಯಿಂದ ಬಹಿರಂಗ
3. ಕೆಆರ್‌ಎಸ್ ಅಣೆಕಟ್ಟೆಯ ಹಿನ್ನೀರಿನ ಪ್ರದೇಶದಲ್ಲಿ ಒತ್ತುವರಿ ತೆರವಿಗೆ ಸಮಿತಿ ರಚನೆ
4. ವಿಜಯ್ ಹಜಾರೆ ಟ್ರೋಫಿ; ಎಲೈಟ್ ಎ ಗುಂಪಿನ ಏಕದಿನ ಕ್ರಿಕೆಟ್ ಪಂದ್ಯದಲ್ಲಿಂದು ಮಧ್ಯಪ್ರದೇಶ ತಂಡಕ್ಕೆ ೨೦೮ ರನ್‌ಗಳ ಗುರಿ ನೀಡಿದ ಕರ್ನಾಟಕ

*********

ಬಳ್ಳಾರಿ ಘಟನೆಯ ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸುವ ಅಗತ್ಯವಿಲ್ಲ. ಪ್ರಕರಣವನ್ನು ತನಿಖೆ ಮಾಡುವ ಸಾಮಾರ್ಥ್ಯ ರಾಜ್ಯದ ಪೊಲೀಸರಿಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ಪ್ರಕರಣಗಳನ್ನು ಸಿಬಿಐಗೆ ವಹಿಸದಿರಲು ಸಚಿವ ಸಂಪುಟದಲ್ಲಿ ತೀರ್ಮಾನಿಸಲಾಗಿದೆ. ಬಳ್ಳಾರಿ ಪ್ರಕರಣವನ್ನು ಸಿಬಿಐಗೆ ಹಸ್ತಾಂತರಿಸುವ ಅಗತ್ಯತೆಯೂ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ, ಹುಬ್ಬಳ್ಳಿ ಘಟನೆಯ ಬಗ್ಗೆ ಪೊಲೀಸ್ ಆಯುಕ್ತ ಶಶಿಕುಮಾರ್ ಹೇಳಿಕೆ ನೀಡಿದ್ದಾರೆ. ಪೊಲೀಸರು ಮಹಿಳೆಯನ್ನು ವಿವಸ್ತ್ರಗೊಳಿಸಿಲ್ಲ. ಬಂಧಿಸುವ ಸಂದರ್ಭದಲ್ಲಿ ಮಹಿಳೆಯೇ ಆ ರೀತಿ ಮಾಡಿಕೊಂಡಿದ್ದಾರೆ ಎನ್ನುವ ಸ್ಪಷ್ಟನೆಯನ್ನು ಅವರು ನೀಡಿದ್ದಾರೆ ಎಂದರು. ಅಕ್ರಮ ಬಾಂಗ್ಲಾ ವಲಸಿಗರನ್ನು ಹಿಡಿದು, ಗಡಿಪಾರು ಮಾಡಲಾಗುತ್ತಿದೆ. ಬಾಂಗ್ಲಾದೇಶದವರು ರಾಜ್ಯದಲ್ಲಿ ಅನಧಿಕೃತವಾಗಿ ಎಲ್ಲಿಯೇ ಇದ್ದರೂ ಪತ್ತೆ ಹಚ್ಚಿ, ಗಡಿಪಾರು ಮಾಡಲಾಗುವುದು ಎಂದು ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

*********

ಯೋಗದಿಂದ ಓಪಿಯಾಯ್ಡ್ ವಿಥ್‌ಡ್ರಾವಲ್ ಲಕ್ಷಣಗಳಿಂದ ಚೇತರಿಸಿಕೊಳ್ಳುವ ಸಮಯ ಅರ್ಧದಷ್ಟು ಕಡಿಮೆಯಾಗಲಿದೆ ಎಂಬ ಅಂಶವನ್ನು ನಿಮ್ಹಾನ್ಸ್‌ನ ಮಾದಕ ವ್ಯಸನ ಮುಕ್ತ ಕೇಂದ್ರದ ಸಂಶೋಧಕರು ತಮ್ಮ ಆವಿಷ್ಕಾರದಿಂದ ಕಂಡುಕೊಂಡಿದ್ದಾರೆ. ಪ್ರತಿಷ್ಠಿತ ಜಾಮಾ ಸೈಕಿಯಾಟ್ರಿ ನಿಯತಕಾಲಿಕದಲ್ಲಿ ಈ ಕುರಿತ ಸಂಶೋಧನಾ ಪ್ರಬಂಧ ಪ್ರಕಟಗೊಂಡಿದೆ. ಈ ಅಧ್ಯಯನದ ಅಂಶದಲ್ಲಿ ಔಷಧಿಯೊಂದಿಗೆ ಯೋಗಾಭ್ಯಾಸ ಮಾಡಿದ ರೋಗಿಗಳು ಕೇವಲ ೫ ದಿನಗಳಲ್ಲಿ ವಿಥ್‌ಡ್ರಾವಲ್ ಲಕ್ಷಣಗಳಿಂದ ಚೇತರಿಸಿಕೊಂಡಿದ್ದಾರೆ. ಆದರೆ ಔಷಧ ಮಾತ್ರ ತೆಗೆದುಕೊಂಡವರಿಗೆ ಚೇತರಿಸಿಕೊಳ್ಳಲು ೯ ದಿನಗಳು ಹಿಡಿದಿವೆ. ಯೋಗವು ದೇಹದ ಒತ್ತಡ ಪ್ರತಿಕ್ರಿಯೆಯನ್ನು ಶಾಂತಗೊಳಿಸುತ್ತದೆ ಎಂದು ಸಂಶೋಧನೆಯ ನೇತೃತ್ವ ವಹಿಸಿದ್ದ ನಿಮ್ಹಾನ್ಸ್‌ನ ಇಂಟಿಗ್ರೇಟಿವ್ ವೈದ್ಯಕೀಯ ವಿಭಾಗದ ಡಾ.ಹೇಮಂತ್ ಭಾರ್ಗವ್ ತಿಳಿಸಿದ್ದಾರೆ. ಈ ಆವಿಷ್ಕಾರವು ಮಾದಕ ವ್ಯಸನದಿಂದ ಬಳಲುತ್ತಿರುವ ಲಕ್ಷಾಂತರ ಜನರಿಗೆ ಹೊಸ ಭರವಸೆ ಮೂಡಿಸುತ್ತದೆ.

*********

ಮಂಡ್ಯ ಜಿಲ್ಲೆಯ ಕೆ.ಆರ್.ಎಸ್ ಅಣೆಕಟ್ಟೆಯ ಹಿನ್ನೀರಿನ ಪ್ರದೇಶದಲ್ಲಿ ಒತ್ತುವರಿ ತೆರವುಗೊಳಿಸಲು ಕೂಡಲೇ ಸರ್ವೆ ಕಾರ್ಯ ಪ್ರಾರಂಭಿಸುವಂತೆ ಜಿಲ್ಲಾಧಿಕಾರಿ ಡಾ.ಕುಮಾರ, ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಈ ಸಂಬಂಧ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ ಹಾಗೂ ದಿನೇಶ್ ಗೂಳಿಗೌಡ ಜಂಟಿಯಾಗಿ ಕೆ.ಆರ್.ಸಾಗರ ಅಣೆಕಟ್ಟೆಯ ಹಿನ್ನೀರಿನ ಪ್ರದೇಶಗಳಲ್ಲಿ ಒತ್ತುವರಿ ಪ್ರಕರಣಗಳು ಹೆಚ್ಚುತ್ತಿದ್ದು, ಅವುಗಳನ್ನು ತೆರವುಗೊಳಿಸುವ ಸಂಬಂಧ ಉಪಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದರು. ಸದ್ಯ ಉಪಮುಖ್ಯಮಂತ್ರಿಗಳು ಈ ಸಂಬಂಧ ಸರ್ವೆ ಮಾಡಿ, ಒತ್ತುವರಿ ಕೂಡಲೇ ತೆರವು ಮಾಡಿಸಿ, ಗಡಿ ಕಲ್ಲುಗಳನ್ನು ನೆಟ್ಟು ವರದಿ ನೀಡುವಂತೆ ಆದೇಶಿಸಿದ್ದಾರೆ ಎಂದು ಅವರು ತಿಳಿಸಿದರು. ಈ ಹಿನ್ನೆಲೆಯಲ್ಲಿ ಪಾಂಡವಪುರ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ಜಲಸಂಪನ್ಮೂಲ ಇಲಾಖೆ, ಭೂ ದಾಖಲೆ ಇಲಾಖೆಗಳು ಸಮನ್ವಯದೊಂದಿಗೆ ಕೂಡಲೇ ಸರ್ವೆ ಕಾರ್ಯ ಆರಂಭಿಸಿ, ಸರ್ವೆ ಮೂಲಕ ಭೂಮಿ ಮತ್ತು ಖಾಸಗಿ ಭೂಮಿಯ ಗಡಿ ರೇಖೆಗಳನ್ನು ಸ್ಪಷ್ಟಪಡಿಸಿ, ಕಾನೂನುಬಾಹಿರವಾಗಿ ಆಕ್ರಮಿಸಲಾದ ಪ್ರದೇಶಗಳನ್ನು ದಾಖಲಿಸಿ, ನಿಖರ ವರದಿ ನೀಡುವಂತೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದರು.

*********

ಕರ್ನಾಟಕ ನಾವೀನ್ಯತೆ ಪ್ರಾಧಿಕಾರದ ಅಡಿಯಲ್ಲಿ ಒಟ್ಟಾರೆ ವಿನ್ಯಾಸ, ಕಾರ್ಯಾಚರಣೆಯ ಕೆಲಸದ ಹರಿವುಗಳು, ಅನುಷ್ಠಾನ ಕಾರ್ಯವಿಧಾನಗಳು, ಕಾನೂನು ವಿಶ್ಲೇಷಣೆ ಮತ್ತು ಜಾಗತಿಕ ಮಾನದಂಡಗಳ ನಿಯಂತ್ರಕದಂತಹ ಉದ್ದೇಶಿತ ಸ್ಯಾಂಡ್ಬಾಕ್ಸ್ ಚೌಕಟ್ಟನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಪರಿಶೀಲಿಸಿದರು. ಇದೇ ವೇಳೆ, ನಿಯಂತ್ರಕ ಸ್ಯಾಂಡ್ಬಾಕ್ಸ್ ಚೌಕಟ್ಟನ್ನು ಕಾರ್ಯಗತಗೊಳಿಸಲು ಮತ್ತು ಇದಕ್ಕೆ ಸಹಾಯ ಮಾಡುವ ಅಸ್ತಿತ್ವದಲ್ಲಿರುವ ಕೆ.ಐ.ಎ ಕಾಯಿದೆಗೆ ಕೆಲವು ನಿರ್ಣಾಯಕ ತಿದ್ದುಪಡಿಗಳನ್ನು ಸಚಿವರು ಸೂಚಿಸಿದರು. ಅಗತ್ಯವಿರುವಲ್ಲಿ ರಾಜ್ಯ ನಿಯಮಗಳ ಸಮಂಜಸವಾದ ಸಡಿಲಿಕೆಯೊಂದಿಗೆ, ಸ್ಯಾಂಡ್ಬಾಕ್ಸ್ ನವೀನ ತಂತ್ರಜ್ಞಾನಗಳನ್ನು ನಿಯಂತ್ರಿತ ಪರಿಸರದಲ್ಲಿ ಪರೀಕ್ಷಿಸಲು ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು. ಸ್ಯಾಂಡ್ಬಾಕ್ಸ್ ಚೌಕಟ್ಟನ್ನು ಔಪಚಾರಿಕವಾಗಿ ಪರಿಚಯಿಸುವ ಮೊದಲು ಅಂತಿಮ ಚೌಕಟ್ಟನ್ನು ಸ್ಟಾರ್ಟ್‌ಅಪ್‌ಗಳು, ಉದ್ಯಮ, ರಾಜ್ಯ ಸರ್ಕಾರದ ಇಲಾಖೆಗಳು ಸಮಾಲೋಚನೆಗಾಗಿ ಶೀಘ್ರದಲ್ಲೇ ತೆರೆದಿಡಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

*********

ಬಾದಾಮಿ ತಾಲೂಕಿನ ನೀರಲಗಿ ಗ್ರಾಮದಲ್ಲಿ, ಉತ್ತರ ಪ್ರದೇಶದ ೧೭ ಮಂದಿ ಕಾರ್ಮಿಕರು ಹಾಗೂ ೧೯ ಮಕ್ಕಳನ್ನು ರಕ್ಷಣೆ ಮಾಡಿ, ಉತ್ತರ ಪ್ರದೇಶದ ಲಲಿತಪೂರ ಜಿಲ್ಲೆಗೆ ಸುರಕ್ಷಿತವಾಗಿ ಕಳುಹಿಸಿ ಕೊಡಲಾಗಿದೆ. ಉತ್ತರ ಪ್ರದೇಶದ ಕಾರ್ಮಿಕರು ಕಬ್ಬು ಕಟಾವು ಮಾಡಲು ಬಂದಿದ್ದು, ಕಾರ್ಮಿಕರಿಗೆ ವೇತನ ಪಾವತಿಸದೇ, ಸ್ವಂತ ಊರಿಗೆ ಹೋಗಲು ಬಿಡದ ಹಿನ್ನೆಲೆಯಲ್ಲಿ ಉತ್ತರ ಪ್ರದೇಶದ ಲಲಿತಪುರ ಜಿಲ್ಲೆಯ ಜಿಲ್ಲಾಧಿಕಾರಿಗಳು ನೀಡಿದ ದೂರಿನ ಪತ್ರದನ್ವಯ ಬಾಗಲಕೋಟೆ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಜಿಲ್ಲಾ ಕಾರ್ಮಿಕ ಅಧಿಕಾರಿ, ತಹಸೀಲ್ದಾರ್, ಕಂದಾಯ ನಿರೀಕ್ಷಕ, ಕಾರ್ಮಿಕ ನಿರೀಕ್ಷಕ, ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ, ಗ್ರಾಮ ಆಡಳಿತಾಧಿಕಾರಿಗಳು ಜಂಟಿಯಾಗಿ, ಕಾರ್ಮಿಕರು ಕೆಲಸ ಮಾಡುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಾರ್ಮಿಕರ ಹೇಳಿಕೆಯನ್ನು ಪಡೆದುಕೊಂಡು, ಕಾರ್ಮಿಕರಿಗೆ ವೇತನ ನೀಡದೇ ಸತಾಯಿಸುತ್ತಿರುವ ಮಹಾರಾಷ್ಟ್ರ ಮೂಲದ ದೀಪಕ್ ಎಂಬುವವರ ವಿರುದ್ಧ ಬಾದಾಮಿ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ.

*********

ಮೆಕ್ಕೆಜೋಳ ವಹಿವಾಟಿನ ಆಧಾರದ ಮೇಲೆ ರೈತರಿಗೆ ವ್ಯತ್ಯಾಸದ ಮೊತ್ತ ಪಾವತಿಗಾಗಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ನೋಂದಣಿ ಕೇಂದ್ರ ಸ್ಥಾಪನೆಗೆ ಕ್ರಮ ವಹಿಸುವಂತೆ ಹಾಸನ ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹಾಸನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿಯಲ್ಲಿ ೨೦೨೫-೨೬ನೇ ಸಾಲಿನಲ್ಲಿ ಮೆಕ್ಕೆಜೋಳದ ಧಾರಣೆಗೆ ನಿಯಂತ್ರಿತ ಮಾರುಕಟ್ಟೆಗಳಲ್ಲಿ ಆಗುವ ವಹಿವಾಟಿನ ಆಧಾರದ ಮೇಲೆ ರೈತರಿಗೆ ವ್ಯತ್ಯಾಸದ ಮೊತ್ತವನ್ನು ಪಾವತಿಸುವ ಕುರಿತು ನಡೆದ ಸಭೆಯಲ್ಲಿ ಅವರು ಮಾತನಾಡಿದರು. ಸರ್ಕಾರದ ಆದೇಶದಂತೆ ಕ್ವಿಂಟಾಲ್‌ಗೆ ೨ ಸಾವಿರದ ೧೫೦ ರೂಪಾಯಿಗಿಂತ ಕಡಿಮೆ ದರದಲ್ಲಿ ಮಾರಾಟವಾದಲ್ಲಿ ವ್ಯತ್ಯಾಸದ ಮೊತ್ತ ಪಾವತಿಯ ವೇಳೆಯಲ್ಲಿ ಯಾವುದೇ ಲೋಪವಾಗದಂತೆ ಕ್ರಮ ಕೈಗೊಳ್ಳಬೇಕು. ಕೃಷಿ ಇಲಾಖೆಯಿಂದ ಗುಣಮಟ್ಟ ಪರಿಶೀಲನೆಗೆ ತಾಂತ್ರಿಕ ಅಧಿಕಾರಿಗಳನ್ನು ನೇಮಕ ಮಾಡಬೇಕು ಎಂದು ಹೇಳಿದರು. ಜಿಲ್ಲೆಗೆ ನಿಗದಿಪಡಿಸಿರುವ ಮೆಕ್ಕೆಜೋಳದ ನೋಂದಣಿ ಕಾರ್ಯವನ್ನು ಬಯೋಮೆಟ್ರಿಕ್ ಆಧಾರಿತವಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಸಂಸ್ಥೆಯು ನಿರ್ವಹಿಸಬೇಕು. ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಕಾರ್ಯದರ್ಶಿಯು ಯು.ಎಂ.ಪಿ. ತಂತ್ರಾಂಶದಲ್ಲಿ ದಾಖಲಾಗಿರುವ ನೋಂದಾಯಿತ ರೈತರ ಮಾರಾಟದ ದೃಢೀಕೃತ ಮಾಹಿತಿಯನ್ನು ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳದವರು ಪರಿಶೀಲಿಸಿ, ಡಿ.ಬಿ.ಟಿ. ಮೂಲಕ ವ್ಯತ್ಯಾಸದ ಮೊತ್ತವನ್ನು ರೈತರಿಗೆ ಪಾವತಿಸಲು ತಿಳಿಸಿದರು.

*********

ಎಸ್.ಎಸ್.ಎಲ್.ಸಿ ಪರೀಕ್ಷೆ ಬಗ್ಗೆ ವಿದ್ಯಾರ್ಥಿಗಳು ಯಾವುದೇ ರೀತಿಯ ಭಯ ಪಡುವ ಅಗತ್ಯವಿಲ್ಲ. ಉಳಿದಿರುವ ದಿನಗಳಲ್ಲಿ ಶ್ರದ್ಧೆಯಿಂದ ಓದಿನ ಕಡೆಗೆ ಹೆಚ್ಚಿನ ಆಸಕ್ತಿ ವಹಿಸುವುದರಿಂದ ಸಮರ್ಥವಾಗಿ ಪರೀಕ್ಷೆ ಎದುರಿಸಬಹುದು ಎಂದು ಬಿಇಒ ಮಧುಮಾಲತಿ ಪಡುವಣೆ ಸಲಹೆ ನೀಡಿದ್ದಾರೆ. ಕೋಲಾರ ತಾಲೂಕಿನ ಅರಾಭಿಕೊತ್ತನೂರು ಸರ್ಕಾರಿ ಪ್ರೌಢಶಾಲೆಯಲ್ಲಿ ೨೦೨೫-೨೬ ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಅವರು ಮಾತನಾಡಿದರು.

*********

ಗುಜರಾತ್‌ನ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ವಿಜಯ್ ಹಜಾರೆ ಟ್ರೋಫಿ ಪಂದ್ಯಾವಳಿಯ ಎಲೈಟ್ 'ಎ' ಗುಂಪಿನ ಏಕದಿನ ಕ್ರಿಕೆಟ್ ಪಂದ್ಯದಲ್ಲಿಂದು ಟಾಸ್

ಸೋತು ಮೊದಲು ಬ್ಯಾಟಿಂಗ್ ಮಾಡಿದ ಕರ್ನಾಟಕ, ೪೭.೪ ಓವರ್‌ಗಳಲ್ಲಿ ೨೦೭ ರನ್ ಗಳಿಗೆ ಎಲ್ಲಾ ವಿಕೆಟ್‌ಗಳನ್ನು ಕಡೆದುಕೊಂಡಿತು. ಈ ಗೆಲುವಿನ ಗುರಿಯನ್ನು ಬೆನ್ನತ್ತಿರುವ ಮಧ್ಯಪ್ರದೇಶ, ಇತ್ತೀಚಿನ ವರದಿ ಬಂದಾಗ ೧೪ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೮೯ ರನ್ ಗಳಿಸಿ ಆಡುತ್ತಿದೆ.

*****END****